ಕೃಷಿ ಉತ್ಪನ್ನಗಳಿಗೆ ಇರುವ ಕನಿಷ್ಠ ಬೆಂಬಲ ಬೆಲೆಗಳನ್ನು ವಾಣಿಜ್ಯ ಹಾಗೂ ಸಿರಿಧಾನ್ಯ ಬೆಳೆಗಳಿಗೂ ವಿಸ್ತರಿಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

26 (115) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಮುಖ ವಾಣಿಜ್ಯ ಹಾಗೂ ಸಿರಿಧಾನ್ಯ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಮೂಲಕ ಮಾರುಕಟ್ಟೆ ಖಾತ್ರಿ ನೀಡುವ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವ್ಯವಸ್ಥೆಯಿಂದ ಮಧ್ಯವರ್ತಿಗಳು ಹಾಗೂ ದಲ್ಲಾಳಿಗಳೇ ಕೃಷಿಕರಿಗಿಂತ ಹೆಚ್ಚಿನ ಲಾಭ ಪಡೆಯುತ್ತಿದ್ದು, ಇದನ್ನು ನಿಯಂತ್ರಣದಲ್ಲಿಡಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ;

(ಇ) ಪ್ರತಿ ವರ್ಷ ಸುಮಾರು 26 ಸಾವಿರ ಕೋಟಿ ಮೊತ್ತದ ಕೃಷಿ ಉತ್ಪನ್ನ ಉತ್ಪಾದನೆಯಾಗುತ್ತಿದ್ದು, ರೈತರಿಂದ ಈ ಉತ್ಪನ್ನವನ್ನು ಖರೀದಿಸಿದ ವ್ಯಾಪಾರಿಗಳು ಸುಮಾರು 48 ಸಾವಿರ ಕೋಟಿ ರೂಪಾಯಿಗಳಿಗೆ ಮಾರಾಟ ಮಾಡಿರುವುದಾಗಿ ಸಮೀಕ್ಷೆಯೊಂದರಲ್ಲಿ ವರದಿಯಾಗಿದ್ದು, ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ;

(ಈ) ರೈತರ ನೆರವಿಗಾಗಿ ಮಾರುಕಟ್ಟೆ ಖಾತ್ರಿ ಯೋಜನೆ ಜಾರಿಗೆ ತರಲು ಸರ್ಕಾರ ಚಿಂತನೆ ನಡೆಸಿದೆಯೇ ; ಇದ್ದಲ್ಲಿ, ಇದರ ರೂಪುರೇಷೆಗಳೇನು ? (ಮಾಹಿತಿ ನೀಡುವುದು)